ಕರ್ನಾಟಕ ಸರ್ಕಾರ
(ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು)
ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ನೆಲಮಹಡಿ, ವಾರ್ತಾ ಇಲಾಖೆ ಎದುರುಗಡೆ, ಜಿಲ್ಲಾಡಳಿತ ಭವನ ಕೊಪ್ಪಳ.
E-Mail :dcpukoppal@gmail.com Ph. No: 08539-225030

ಸಂ: ಕಂದಾಯ/ಜಿಮರಘಕೊ/ಬಾವಿನಿಕೋ/ಅಮಗತಾ /2024-25. ದಿನಾಂಕ: 07.10.2024.

## ~::ವಿಶೇಷ ಸೂಚನಾ ಪತ್ರ ::~

**ವಿಷಯ:** ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಭಿಣಿ (ಬಾಲ ಗರ್ಭಿಣಿ) ಯಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಕರ್ತವ್ಯ ಮತ್ತು ಜವಾಬ್ದಾರಿಯನ್ನು ಸರಕಾರವು ನಿಗದಿಪಡಿಸಿದ್ದು, ಕಡ್ಡಾಯವಾಗಿ ಅದರನ್ವಯ ಕಾರ್ಯನಿರ್ವಹಿಸುವ ಕುರಿತು.

**ಉಲ್ಲೇಖ:** 1. ಸರಕಾರದ ಆದೇಶ ಸಂ: ಮಮಇ 115 ಮಭಾಬ ಮಮಅ 2024 ಬೆಂಗಳೂರು, ದಿನಾಂಕ: 06.09.2024.

~***~

ಈ ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ "ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಭಿಣಿ (ಬಾಲ ಗರ್ಭಿಣಿ)ಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು, ಸಂತ್ರಸ್ತ ಮಗುವಿನ ರಕ್ಷಣೆ, ಪುನರ್‌ವಸತಿ ಹಾಗೂ ತಪ್ಪಿತಸ್ಥರು ಶಿಕ್ಷೆಯಿಂದ ಪಾರಾಗದಂತೆ ನೋಡಿಕೊಳ್ಳಲು ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸುವಂತೆ ವಿವಿಧ ಭಾಗೀದಾರ ಇಲಾಖೆಗಳ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿಗದಿಪಡಿಸಿ ಉಲ್ಲೇಖ (1)ರಲ್ಲಿ ಸರಕಾರವು ಆದೇಶ ಹೊರಡಿಸಿರುತ್ತದೆ".

ಆದ್ದರಿಂದ ಈ ಪತ್ರದೊಂದಿಗೆ ಉಲ್ಲೇಖ(1)ರ ಸರಕಾರಿ ಆದೇಶದ ಪ್ರತಿಯನ್ನು ಲಗತ್ತಿಸಿ ರವಾನಿಸುತ್ತಾ, ಸದರಿ ಆದೇಶವನ್ನು ಪಾಲಿಸಿ, ಅದರನ್ವಯ ಕಾರ್ಯನಿರ್ವಹಿಸುವುದು ಹಾಗೂ ತಮ್ಮ ಅಧೀನ ಅಧಿಕಾರಿಗಳಿಗೂ ಸದರಿ ಆದೇಶದ ಕುರಿತು ಮಾಹಿತಿಯನ್ನು ನೀಡಿ, ಈ ರೀತಿಯ ಪ್ರಕರಣಗಳು ಘಟಿಸದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸುವುದು ಹಾಗೂ ಈ ಕುರಿತು ಕೈಗೊಂಡ ಕ್ರಮದ ಬಗ್ಗೆ ಮಾಹಿತಿಯನ್ನು ಈ ಕಛೇರಿಗೆ ನೀಡುವಂತೆ ಸೂಚಿಸಿದೆ.

ತಮ್ಮ ವಿಶ್ವಾಸಿ

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಜಿಲ್ಲಾ ಮಕ್ಕಳ ರಕ್ಷಣಾ ಘಟಕ
ಕೊಪ್ಪಳ.

ಗೆ,

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
   ಜಿಲ್ಲಾ ಪಂಚಾಯತ್, ಕೊಪ್ಪಳ.
2. ಜಿಲ್ಲಾ ಪೊಲೀಸ್ ಅಧೀಕ್ಷಕರು,
   ಜಿಲ್ಲಾ ಪೊಲೀಸ್ ಇಲಾಖೆ, ಕೊಪ್ಪಳ.
3. ಅಧ್ಯಕ್ಷರು
   ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ, ಕೊಪ್ಪಳ.
4. ಯೋಜನಾ ನಿರ್ದೇಶಕರು,
   ಜಿಲ್ಲಾ ನಗರಾಭಿವೃದ್ಧಿ ಕೋಶ, ಕೊಪ್ಪಳ.

5. ಉಪನಿರ್ದೇಶಕರು,
   ಸಾರ್ವಜನಿಕ ಶಿಕ್ಷಣ ಇಲಾಖೆ, ಕೊಪ್ಪಳ
6. ಮಾನ್ಯ ಉಪನಿರ್ದೇಶಕರು
   ಪದವಿಪೂರ್ವ ಶಿಕ್ಷಣ ಇಲಾಖೆ, ಕೊಪ್ಪಳ.
7. ಮಾನ್ಯ ಉಪನಿರ್ದೇಶಕರು,
   ಸಮಾಜ ಕಲ್ಯಾಣ ಇಲಾಖೆ, ಕೊಪ್ಪಳ.
8. ಮಾನ್ಯ ಉಪನಿರ್ದೇಶಕರು,
   ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ.
9. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು
   ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ.
10. ಜಿಲ್ಲಾ ಅಧಿಕಾರಿಗಳು,
    ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೊಪ್ಪಳ.
11. ಜಿಲ್ಲಾ ಅಧಿಕಾರಿಗಳು,
    ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಪ್ಪಳ.
12. ತಹಶೀಲ್ದಾರರು ಹಾಗೂ ಅಧ್ಯಕ್ಷರು
    ತಾಲೂಕು ಮಟ್ಟದ ವಿವಿಧ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಸಮಿತಿಗಳು.
    ಕೊಪ್ಪಳ/ಗಂಗಾವತಿ/ಕನಕಗಿರಿ/ಕಾರಟಗಿ/ಯಲಬುರ್ಗಾ/ಕುಕನೂರು/ಕುಷ್ಟಗಿ.
13. ಕಾರ್ಯನಿರ್ವಾಹಕ ಅಧಿಕಾರಿಗಳು
    ತಾಲೂಕು ಪಂಚಾಯತ್,
    ಕೊಪ್ಪಳ/ಗಂಗಾವತಿ/ಕನಕಗಿರಿ/ಕಾರಟಗಿ/ಯಲಬುರ್ಗಾ/ಕುಕನೂರು/ಕುಷ್ಟಗಿ.
14. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು,
    ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ,
    ಕೊಪ್ಪಳ/ ಗಂಗಾವತಿ/ ಕನಕಗಿರಿ/ಯಲಬುರ್ಗಾ/ಕುಷ್ಟಗಿ.
15. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸದಸ್ಯ ಕಾರ್ಯದರ್ಶಿಗಳು\ಗ್ರಾಮ ಪಂಚಾಯತ್ ಮಟ್ಟದ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಹಾಗೂ ಕಾವಲು ಸಮಿತಿರವರಿಗೆ.

ಕರಪ

# ಕರ್ನಾಟಕಸರ್ಕಾರ

## ಮಕ್ಕಳ ರಕ್ಷಣಾ ನಿರ್ದೇಶನಾಲಯ

3ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ, ಡಾ॥ ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು-560001
e-mail ID: icps.kar@gmail.com
Ph.No.080-22869381/82

ಸಂಖ್ಯೆ:ಮರನಿ/ಬಾ.ವಿ.ನಿ.ಕೋ/2024-25. ದಿನಾಂಕ: 03-10-2024

**ರವರಿಗೆ,**

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು
ಜಿಲ್ಲಾ ಮಕ್ಕಳ ರಕ್ಷಣಾ ಘಟಕ
31 ಜಿಲ್ಲೆಗಳು.

**ಮಾನ್ಯರೆ,**

**ವಿಷಯ :** ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಬಿಣಿ (ಬಾಲ ಗರ್ಬಿಣಿ)ಯ ರಾಗಿರುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿಗದಿಪಡಿಸಿರುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ:ಮಮಇ/115/ಮಮಅ 2024, ಬೆಂಗಳೂರು, ದಿನಾಂಕ:06.09.2024.
2. ಸರ್ಕಾರದ ಆದೇಶ ಸಂಖ್ಯೆ:ಮಮಇ/44/ಮಮಅ 2024, ಬೆಂಗಳೂರು, ದಿನಾಂಕ:66.06.2024.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ(1)ರ ಸರ್ಕಾರದ ಆದೇಶದನ್ವಯ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಬಿಣಿ (ಬಾಲ ಗರ್ಬಿಣಿ)ಯ ರಾಗಿರುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

ಆದ್ದರಿಂದ ಉಲ್ಲೇಖ(1)ರ ಸರ್ಕಾರದ ಆದೇಶ ಮತ್ತು ಅದರಲ್ಲಿ ನೀಡಿರುವ ಅನುಬಂಧದಲ್ಲಿರುವ ಸಂಬಂಧಿಸಿದ ಎಲ್ಲಾ ಜಿಲ್ಲಾ ಹಂತದ ಇಲಾಖೆಗಳಿಗೂ ಸರ್ಕಾರದ ಆದೇಶ ತಲುಪಿಸುವುದು ಮತ್ತು ತಾಲ್ಲೂಕು ಹಂತದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಮೂಲಕ ಸಹಾಯಕ ಮಕ್ಕಳ ರಕ್ಷಣಾಧಿಕಾರಿಗಳಿಗೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಮತ್ತು ಗ್ರಾಮ ಪಂಚಾಯತ್/ನಗರ/ಗ್ರಾಮ ಮಟ್ಟದ ಎಲ್ಲಾ ಸಂಬಂಧಿಸಿದ ಇಲಾಖೆಗಳಿಗೆ ಸರ್ಕಾರದ ಆದೇಶದ ಪ್ರತಿ ತಲುಪಿಸಲು ಕ್ರಮವಹಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ.

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಭಿಣಿ (ಬಾಲ ಗರ್ಭಿಣಿ) ಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿಗದಿಪಡಿಸುವ ಬಗ್ಗೆ.

**ಓದಲಾಗಿದೆ:** ಮಾನ್ಯ ಮುಖ್ಯ ಮಂತ್ರಿಯವರ ಟಿಪ್ಪಣಿ ಸಂಖ್ಯೆ: CM/OSD/33/2024, ದಿನಾಂಕ: 15.04.2024.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಯವರು ಕೇಂದ್ರ ಸರ್ಕಾರದ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ (RCH) ಪೋರ್ಟಲ್‌ನಲ್ಲಿರುವ ಅಂಕಿ ಅಂಶಗಳ ಪ್ರಕಾರ 2023ರ ಜನವರಿಯಿಂದ ನವೆಂಬರ್ 2023ರವರೆಗೆ ರಾಜ್ಯದಲ್ಲಿ 18 ವರ್ಷದೊಳಗಿನ 28657 ಬಾಲಕಿಯರು ಗರ್ಭಿಣಿಯರಾಗಿರುವ ವರದಿ ಕುರಿತಂತೆ ಬಾಲಗರ್ಭಿಣಿ ಪ್ರಕರಣಗಳಿಗೆ ಕಾರಣವಾಗಿರುವ ಇಂತಹ ಆಚರಣೆಗಳನ್ನು, ಅಪರಾಧ ಪ್ರಕರಣಗಳನ್ನು ತಳಮಟ್ಟದಲ್ಲಿ ತಡೆಯಲು ಹಾಗೂ ಕಾನೂನು ರೀತಿ ರೂಪಿಸಲಾದ ಪೋಕ್ಸೋ, ಮಕ್ಕಳ ರಕ್ಷಣಾ ಕಾಯ್ದೆ, ಬಾಲಾಪರಾಧಗಳು, ಬಾಲ್ಯವಿವಾಹ ನಿಷೇಧ ಮುಂತಾದ ಕಾಯ್ದೆಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳು ಸಮನ್ವಯತೆಯಿಂದ ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಲು ಅಗತ್ಯ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಿರುತ್ತಾರೆ.

ಮಾನ್ಯ ಮುಖ್ಯಮಂತ್ರಿಯವರ ನಿರ್ದೇಶನದ ಹಿನ್ನೆಲೆಯಲ್ಲಿ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಭಿಣಿಯರಾಗುವುದನ್ನು ತಡೆಗಟ್ಟುವುದು, ಸಂತ್ರಸ್ತರಿಗೆ ರಕ್ಷಣೆ ಹಾಗೂ ಮನೋಸ್ಥೈರ್ಯ ಹೆಚ್ಚಿಸುವುದು ಹಾಗೂ ಈ ಉದ್ದೇಶಕ್ಕಾಗಿ ಇರುವ ಕಾಯ್ದೆಗಳು ಹಾಗೂ ಕಾನೂನುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವ ಮೂಲಕ ತಪ್ಪಿತಸ್ಥರು ಶಿಕ್ಷೆಯಿಂದ ಪಾರಾಗದಂತೆ ನೋಡಿಕೊಳ್ಳಲು ಅಗತ್ಯ ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೊಳಿಸುವುದಕ್ಕಾಗಿ ರಾಜ್ಯಮಟ್ಟದಲ್ಲಿ, ಕಾನೂನು ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಒಳಾಡಳಿತ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ/ಹಜ್ ಮತ್ತು ವಕ್ಫ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಂದಾಯ ಇಲಾಖೆಗಳಿಗೆ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ನಿಗದಿಪಡಿಸಲು **ಸದರಿ ಇಲಾಖೆಗಳ** ಅಭಿಪ್ರಾಯ/ ಸಹಮತಿ ಕೋರಲಾಗಿತ್ತು.

ಅದರಂತೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ/ಹಜ್ ಮತ್ತು ವಕ್ಫ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಂದಾಯ ಇಲಾಖೆಗಳು ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಭಿಣಿಯರಾಗುವುದನ್ನು ತಡೆಗಟ್ಟಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ನಿಗದಿಪಡಿಸಲಾಗಿದ್ದ ಜವಾಬ್ದಾರಿ ಕರ್ತವ್ಯಗಳಿಗೆ ಸಹಮತಿ ನೀಡಿರುತ್ತಾರೆ. ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಮಮಇ 115 ಮಮಅ 2024 ಬೆಂಗಳೂರು,</u>**
**<u>ದಿನಾಂಕ: 06.09.2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಭಿಣಿ (ಬಾಲ ಗರ್ಭಿಣಿ) ಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಒಳಾಡಳಿತ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ/ಹಜ್ ಮತ್ತು ವಕ್ಫ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಂದಾಯ ಇಲಾಖೆಗಳಿಗೆ ಅನುಬಂಧದಲ್ಲಿರುವಂತೆ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿಗದಿಪಡಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 264 ವೆಚ್ಚ-10/2024, ದಿನಾಂಕ: 04.07.2024 ರಲ್ಲಿ ನೀಡಿರುವ ಸಹಮತಿ ಹಾಗೂ ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ. 419/2024, ದಿನಾಂಕ: 21.08.2024ರ ನಿರ್ಣಯದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಸಿ. ಬಲರಾಮ್)**
ಸರ್ಕಾರದ ಉಪ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು, (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-560001.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು-560001.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ , ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-560001.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು-560001.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು-560001.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು-01.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-01.
9. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು-01.
10. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ/ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು-560001.
11. ಜಂಟಿ ಕಾರ್ಯದರ್ಶಿ,(ಸಚಿವ ಸಂಪುಟ ಶಾಖೆ), ಮುಖ್ಯ ಕಾರ್ಯದರ್ಶಿಯವರ ಕಛೇರಿ (ಪ್ರಕರಣ ಸಂಖ್ಯೆ: ಸಿ. 419/2024), ವಿಧಾನ ಸೌಧ, ಬೆಂಗಳೂರು.
12. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ವಿ.ವಿ. ಟವರ್, ಬೆಂಗಳೂರು-560001.
13. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪಿಡಬ್ಲ್ಯೂಡಿ ಕಟ್ಟಡ ಆವರಣ, ಆನಂದ್‌ರಾವ್ ಸರ್ಕಲ್, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

*******

# ಅನುಬಂಧ-1

## ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಗರ್ಭಿಣಿ (ಬಾಲ ಗರ್ಭಿಣಿ) ಯರಾಗುವುದನ್ನು ಪರಿಣಾಮಕಾರಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ನಿಗದಿಪಡಿಸಲು ಉದ್ದೇಶಿಸಿರುವ ಕರ್ತವ್ಯ ಮತ್ತು ಜವಾಬ್ದಾರಿಗಳು

1. <u>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ:</u>

- ಕೇಂದ್ರ ಸರ್ಕಾರದ ಆರ್‌ಸಿಎಚ್ ಪೋರ್ಟಲ್‌ನಲ್ಲಿರುವ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
- ಬಾಲಗರ್ಭಿಣಿಯರ ನಿಖರವಾದ ವಯಸ್ಸನ್ನು ದಾಖಲಿಸಲು Age Matrix Index ಕಡ್ಡಾಯಗೊಳಿಸುವುದು.
- ಖಾಸಗಿ ಆಸ್ಪತ್ರೆಯಲ್ಲಿ ಬಾಲಗರ್ಭಿಣಿಯರ ಪ್ರಕರಣಗಳನ್ನು ವರದಿ ಮಾಡಲು ಸರಳೀಕೃತ ವಿಧಾನವನ್ನು ರಚಿಸುವುದು.
- ವೈದ್ಯರ ಸಲಹೆ ಇಲ್ಲದೆ ಷೆಡ್ಯೂಲ್-ಹೆಚ್ ಔಷಧಿಗಳಾದಂತಹ ಗರ್ಭಪಾತ ಮಾತ್ರೆಗಳನ್ನು ಮಾರಾಟ ಮಾಡುವಂತಹ ಅಂಗಡಿಗಳ ಮೇಲೆ ಔಷಧ ನಿಯಂತ್ರಣ ಇಲಾಖೆ ಸೂಕ್ತ ಕಾನೂನು ಕ್ರಮ ಜರುಗಿಸುವುದು.
- ಅನಧಿಕೃತವಾಗಿ ಗರ್ಭಪಾತ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ವೈದ್ಯರು ಮತ್ತು ಸಾರ್ವಜನಿಕರುಗಳ ವಿರುದ್ಧ PCPNDT ಕಾಯ್ದೆಯನ್ವಯ ಕ್ರಮ ಜರುಗಿಸುವುದು ಮತ್ತು ಈ ಕುರಿತು ವೈದ್ಯಕೀಯ ಮಂಡಳಿ ಹಾಗೂ ಇನ್ನಿತರ ನುರಿತ ತಜ್ಞರ ಸಲಹಾ ಸಮಿತಿ ರಚಿಸುವುದು.
- ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು ಅವರ ವ್ಯಾಪ್ತಿಯ ಸರ್ಕಾರಿ/ಖಾಸಗಿ ವಸತಿ ಶಾಲೆಗಳಿಗೆ ನಿಗದಿತ ವೇಳಾಪಟ್ಟಿಯಂತೆ ಕಡ್ಡಾಯವಾಗಿ ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ನಡೆಸುವುದು.
- ಪೋಷಕರು ಹಾಗೂ ಹದಿಹರೆಯದ ಮಕ್ಕಳಿಗೆ ಸುಲಭವಾಗಿ ಅರ್ಥವಾಗುವ ಮಾಧ್ಯಮಗಳ ಮೂಲಕ ಲೈಂಗಿಕ ಶಿಕ್ಷಣವನ್ನು ನೀಡಲು ಕ್ರಮವಹಿಸುವುದು.
- ಶಾಲಾಮಟ್ಟದಲ್ಲಿ ಮಕ್ಕಳಿಗೆ ದೈಹಿಕ ಬೆಳವಣಿಗೆ ಹಾಗೂ ಆರೋಗ್ಯದ ಬಗ್ಗೆ ಅರಿವು ಮೂಡಿಸುವುದು.
- ಆರ್.ಸಿ.ಎಚ್ ಪೋರ್ಟಲ್‌ನಲ್ಲಿ ದಾಖಲಾಗುವ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಗರ್ಭಿಣಿಯರ ಮಾಹಿತಿಯನ್ನು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತೆಯರು ಗ್ರಾಮ/ತಾಲ್ಲೂಕು/ಜಿಲ್ಲಾ ಪಂಚಾಯತ್‌ಗಳಿಗೆ ಒದಗಿಸುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆ, 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ, 2016ರ ಕಲಂ 16(1) ರನ್ವಯ ಗ್ರಾಮ/ತಾಲ್ಲೂಕು/ಜಿಲ್ಲಾ/ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ಆರೋಗ್ಯ ನಿರೀಕ್ಷಕರು, ತಾಲ್ಲೂಕು ವೈದ್ಯಾಧಿಕಾರಿಗಳು, ಜಿಲ್ಲಾ ಆರೋಗ್ಯಾಧಿಕಾರಿಗಳು ಮತ್ತು ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರುಗಳನ್ನು "ಬಾಲ್ಯವಿವಾಹ ನಿಷೇಧಾಧಿಕಾರಿ" ಗಳೆಂದು ಗುರುತಿಸಿ ದಿನಾಂಕ:28.05.2018ರಂದು ಅಧಿಸೂಚಿಸಲಾಗಿದೆ. ಅದರಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.

2. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ:

- ವಿದ್ಯಾರ್ಥಿಗಳು 7 ದಿನಗಳಿಗಿಂತ ಹೆಚ್ಚಿನ ಅವಧಿಗೆ ಶಾಲೆಗೆ ಗೈರುಹಾಜರಾದಲ್ಲಿ ಸಂಬಂಧಪಟ್ಟ ಶಾಲಾಶಿಕ್ಷಕರು ಅನುಸರಣೆ ಮಾಡಿ ಶಾಲೆಗೆ ಮರುಹಾಜರಾಗುವಂತೆ ಕ್ರಮವಹಿಸುವುದು.
- ಶಾಲೆಗೆ ಗೈರುಹಾಜರಾದ ವಿದ್ಯಾರ್ಥಿಗಳ ಮಾಹಿತಿ ಲಭ್ಯವಾಗದ ಪ್ರಕರಣಗಳು ಕಂಡುಬಂದಲ್ಲಿ ವ್ಯಾಪ್ತಿಯ ಗ್ರಾಮಪಂಚಾಯತ್ ಕಾವಲು ಸಮಿತಿಗೆ ವರದಿ ನೀಡುವುದು.
- ವಿದ್ಯಾರ್ಥಿಗಳು ಶಾಲೆಗೆ ಗೈರುಹಾಜರಾಗಲು ನಿಖರವಾದ ಕಾರಣಗಳನ್ನು ತಿಳಿದು, ಶಾಲೆಗೆ ಮರುದಾಖಲಿಸಲು ಸೂಕ್ತ ಕ್ರಮವಹಿಸುವುದು. ಶಾಲೆಗಳಲ್ಲಿ ಪ್ರಮುಖವಾಗಿ ವಿದ್ಯಾರ್ಥಿನಿಯರಿಗೆ ಸುಸಜ್ಜಿತ ಶೌಚಾಲಯ ಹಾಗೂ ನೀರಿನ ವ್ಯವಸ್ಥೆ ಕಲ್ಪಿಸುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆಯ ಬಗ್ಗೆ ಮತ್ತು ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಮಾಧ್ಯಮಿಕ ಹಾಗೂ ಪ್ರೌಢ ಶೈಕ್ಷಣಿಕ ಪಠ್ಯಕ್ರಮದಲ್ಲಿ ಅಧ್ಯಾಯವನ್ನು ಅಳವಡಿಸುವುದು.
- ಶಾಲಾ ಆವರಣದಲ್ಲಿ ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಮತ್ತು ಬಾಲ್ಯವಿವಾಹ ನಡೆಯುವ ಕುರಿತು ಮಾಹಿತಿ ದೊರೆತಲ್ಲಿ ಸಂಪರ್ಕಿಸಬೇಕಾದ ಸಹಾಯವಾಣಿ ಹಾಗೂ ಅಧಿಕಾರಿಗಳ ಮಾಹಿತಿಯನ್ನು ಪ್ರದರ್ಶಿಸುವುದು.
- ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರಿಗೆ ಮತ್ತು ಶಾಲಾ ಶಿಕ್ಷಕರುಗಳಿಗೆ ಬಾಲ್ಯವಿವಾಹ ನಿಷೇಧ ಹಾಗೂ ಬಾಲಗರ್ಭಿಣಿಯರ ಪ್ರಕರಣಗಳ ತಡೆಗಟ್ಟುವ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಏರ್ಪಡಿಸುವುದು.
- ಶಾಲೆಗಳಲ್ಲಿ ಕಡ್ಡಾಯವಾಗಿ ಪೋಷಕರ ಸಭೆಗಳನ್ನು ಏರ್ಪಡಿಸಿ ಬಾಲ್ಯ ವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವುದು.
- ಶಾಲಾ ಮುಖ್ಯೋಪಾಧ್ಯಾಯರು ವ್ಯಾಪ್ತಿಯ ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿಗಳನ್ನು ಸಂಪರ್ಕಿಸಿ, ಮಕ್ಕಳಿಗೆ ಲೈಂಗಿಕ ಶಿಕ್ಷಣದ ಅರಿವು, ಬಾಲಗರ್ಭಾವಸ್ಥೆಯಿಂದ ಮಗುವಿನ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. ಹಾಗೂ ಕಾರ್ಯಕ್ರಮದ ಮೇಲ್ವಿಚಾರಣೆಯನ್ನು ತಾಲ್ಲೂಕು ಮಟ್ಟದ ಅಧಿಕಾರಿಗಳು ನಿರ್ವಹಿಸುವಂತೆ ಕ್ರಮವಹಿಸುವುದು.
- ಶಾಲಾ ಮುಖ್ಯೋಪಾಧ್ಯಾಯರು ತಮ್ಮ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.
- ಶಾಲೆಯಲ್ಲಿ ಪ್ರತೀ ತಿಂಗಳು ಮೌಲ್ಯಾಧಾರಿತ ಶಿಕ್ಷಣದ ತರಬೇತಿಗಳನ್ನು ನಡೆಸುವುದು.
- ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮೇಲಿನ ವಿಷಯಗಳನ್ನು ಪ್ರತೀ ತಿಂಗಳು ವರದಿ ಮಾಡುವುದು.
- ಶಾಲಾ ವ್ಯಾಪ್ತಿಯ ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿಗಳನ್ನು ಸಂಪರ್ಕಿಸಿ, ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ ಆಯೋಜಿಸುವುದು.

- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ 2016ರ ಸೆಕ್ಷನ್ 16(1)ರನ್ವಯ ಗ್ರಾಮ/ತಾಲ್ಲೂಕು/ಜಿಲ್ಲಾ/ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ಶಾಲಾ ಮುಖ್ಯೋಪಾಧ್ಯಾಯರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಉಪನಿರ್ದೇಶಕರು ಮತ್ತು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ದಿನಾಂಕ:28.05.2018ರಂದು ಅಧಿಸೂಚನೆ ಹೊಡಿಸಲಾಗಿದೆ. ಅದರಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.

3. <u>ಒಳಾಡಳಿತ ಇಲಾಖೆ</u>:

- ಪೋಕ್ಸೋ ಕಾಯ್ದೆ, ಬಾಲನ್ಯಾಯ ಕಾಯ್ದೆ (ಮಕ್ಕಳ ರಕ್ಷಣೆ ಮತ್ತು ಪೋಷಣೆ), ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಮಕ್ಕಳ ಸಂಬಂಧಿತ ಇತರ ಕಾಯ್ದೆಗಳ ಕುರಿತು ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಸಂವೇದನಾ ಶೀಲತೆ ತರಬೇತಿ ನೀಡುವುದು. ಹಾಗೂ ಜಾರಿಯಲ್ಲಿರುವ ಸಂಬಂಧಿತ ಕಾನೂನುಗಳನ್ನು ಕಟ್ಟುನಿಟ್ಟಾಗಿ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಗತ್ಯ ತರಬೇತಿ ಸೂಚನೆಗಳನ್ನು ನೀಡಲು ಕ್ರಮವಹಿಸುವುದು.
- ಸ್ಥಳೀಯ ಪೊಲೀಸ್ ಅಧಿಕಾರಿ/ಸಿಬ್ಬಂದಿಯವರು ಗ್ರಾಮ ಪಂಚಾಯತ್ ಮಟ್ಟದ ಮಹಿಳೆಯರು ಮತ್ತು ಮಕ್ಕಳ ಕಾವಲು ಸಮಿತಿ ಸಭೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ಬಾಲ್ಯವಿವಾಹ ತಡೆಗಟ್ಟುವಲ್ಲಿ ಕ್ರಮವಹಿಸುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ 2016ರ ಸೆಕ್ಷನ್ 16(1)ರನ್ವಯ ಗ್ರಾಮ/ತಾಲ್ಲೂಕು/ಜಿಲ್ಲಾ/ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ಪ್ರದೇಶ ವ್ಯಾಪ್ತಿಯ ಪೊಲೀಸ್ ಇನ್‌ಸ್ಪೆಕ್ಟರ್, ಪೊಲೀಸ್ ಸಬ್ ಇನ್ಸ್ ಪೆಕ್ಟರ್, ಸರ್ಕಲ್ ಇನ್ಸ್ ಪೆಕ್ಟರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು/ಹಿರಿಯ ಮಕ್ಕಳ ಕಲ್ಯಾಣಾಧಿಕಾರಿ(SJPU) ಮತ್ತು ಪೊಲೀಸ್ ಮಹಾನಿರ್ದೇಶಕರು/ಸಂಬಂಧಿಸಿದ IGP/ಪೊಲೀಸ್ ಮಹಾನಿರ್ದೇಶಕರು Training, ಪೊಲೀಸ್ ಇಲಾಖೆ ಇವರುಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ದಿನಾಂಕ:28.05.2018ರಂದು ಅಧಿಸೂಚನೆ ಹೊರಡಿಸಲಾಗಿದೆ. ಅದರಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.
- ಬಾಲ್ಯವಿವಾಹ ನಿಷೇಧ ಕರ್ನಾಟಕ ನಿಯಮಗಳು,2016ರನ್ವಯ "ಪ್ರತಿಯೊಬ್ಬ ಪೊಲೀಸ್ ಅಧಿಕಾರಿಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ನಡೆದ ಅಪರಾಧದ ಸಂಜ್ಞೆಯನ್ನು ಗಮನಿಸಿ ತಾನಾಗಿಯೇ (Suo-moto) ಕ್ರಮ ಕೈಗೊಳ್ಳಬಹುದಾಗಿದ್ದು ಬಾಲ್ಯವಿವಾಹಗಳು ನಡೆದ ಅಥವಾ ನಡೆಯುತ್ತಿರುವ ಸಂದರ್ಭಗಳಲ್ಲಿ Suo-moto ಪ್ರಕರಣವನ್ನು ದಾಖಲಿಸುವುದು.
- ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.

- ತುರ್ತು (ERSS) ಸಹಾಯವಾಣಿ 112 ಕುರಿತು ವ್ಯಾಪಕ ಪ್ರಚಾರ ನೀಡುವುದು.

4. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ:

- ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಗಳನ್ನು ದಿನಾಂಕ:06.08.2019ರ ಆದೇಶದಂತೆ ಕಡ್ಡಾಯವಾಗಿ ಪ್ರತ ಗ್ರಾಮ ಪಂಚಾಯತ್‌ಗಳಲ್ಲಿ ರಚಿಸುವುದು. ಹಾಗೂ ಕಾವಲು ಸಮಿತಿಗಳು ನಿಗದಿಪಡಿಸಿದ ಕಾರ್ಯ ಮತ್ತು ಜವಾಬ್ದಾರಿಗಳನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು.
- ಗ್ರಾಮ ಪಂಚಾಯತ್ ಮಟ್ಟದಲ್ಲಿ 18 ವರ್ಷದೊಳಗಿನ ಹೆಣ್ಣು ಮಕ್ಕಳು ಮತ್ತು 21 ವರ್ಷದೊಳಗಿನ ಗಂಡು ಮಕ್ಕಳ ಮಾಹಿತಿಯನ್ನು ಸಂಗ್ರಹಿಸುವುದು.
- ಗ್ರಾಮದಲ್ಲಿ ಯಾವುದೇ ಬಾಲ ಗರ್ಭಿಣಿಯರು /ಬಾಲ್ಯವಿವಾಹ ಪ್ರಕರಣಗಳು ನಡೆಯುತ್ತಿರುವುದು ಕಂಡುಬಂದಲ್ಲಿ ಕೂಡಲೇ ಸೂಕ್ತ ಕ್ರಮವಹಿಸುವುದು.
- ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಶಾಲೆಯಿಂದ ಹೊರಗುಳಿದ ಮಕ್ಕಳ ಪೋಷಕರ ಮನವೊಲಿಸಿ, ಶಾಲೆಗೆ ಮರಳಿ ದಾಖಲಿಸುವುದು.
- ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಮಕ್ಕಳಿಗೆ ವಿವಿಧ ರೀತಿಯ ಕೌಶಲ್ಯ ತರಬೇತಿಯನ್ನು ನೀಡಲು ಕ್ರಮವಹಿಸುವುದು.
- ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಸಾರ್ವಜನಿಕರು/ಧಾರ್ಮಿಕ ಮುಖಂಡರಿಗೆ ಹಾಗೂ ಕಾವಲು ಸಮಿತಿಯ ಸದಸ್ಯರಿಗೆ ಹಮ್ಮಿಕೊಳ್ಳುವುದು.
- ಕಡ್ಡಾಯವಾಗಿ ಮಕ್ಕಳ ಕಾವಲು ಸಮಿತಿ ಸಭೆಗಳನ್ನು ಹಮ್ಮಿಕೊಳ್ಳುವುದು.
- ಲೈಂಗಿಕ ದೌರ್ಜನ್ಯ/ಬಾಲಗರ್ಭಿಣಿ ಪ್ರಕರಣಗಳಿಗೆ ಸಂಬಂಧಿಸಿದ ಮಕ್ಕಳು ಕಂಡುಬಂದಲ್ಲಿ ಮಗುವಿಗೆ ರಕ್ಷಣೆ ನೀಡಿ, ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.
- ಆರ್‌ಸಿಎಚ್ ಪೋರ್ಟಲ್‌ನಲ್ಲಿ ದಾಖಲಾಗುವ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಗರ್ಭಿಣಿಯರ ಮಾಹಿತಿಯನ್ನು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತೆಯರಿಂದ ಪಡೆದು ಅಗತ್ಯವಿದ್ದಲ್ಲಿ ರಕ್ಷಣೆ ಮತ್ತು ಪುನರ್ವಸತಿ ಕಲ್ಪಿಸುವುದು. ಹಾಗೂ ಭವಿಷ್ಯದಲ್ಲಿ ಇಂತಹ ಪ್ರಕರಣಗಳು ವರದಿಯಾಗದಂತೆ ನಿಗಾವಹಿಸುವುದು.
- ಮಕ್ಕಳ ಸಹಾಯವಾಣಿ-1098 ಹಾಗೂ ಮಹಿಳಾ ಸಹಾಯವಾಣಿ-181 ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಪ್ರಚಾರ ಮಾಡುವುದು.
- ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಡೆಯುವ ವಿವಾಹಗಳು "ಬಾಲ್ಯವಿವಾಹಗಳಲ್ಲ" ಎಂದು ಖಾತರಿಪಡಿಸಿಕೊಳ್ಳುವುದು.
- ಮಕ್ಕಳ ರಕ್ಷಣಾ ಕಾವಲು ಸಮಿತಿಗಳು ನಿಯಮಿತವಾಗಿ ಸಭೆಗಳನ್ನು ನಡೆಸುತ್ತಿರುವ ಕುರಿತು ಮತ್ತು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿರುವ ಕುರಿತು ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್‌ಗಳು ಮೇಲ್ವಿಚಾರಣೆ ಮಾಡುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ 2016ರ ಸೆಕ್ಷನ್ 16(1)ರನ್ವಯ ಗ್ರಾಮ/ತಾಲ್ಲೂಕು/ಜಿಲ್ಲಾ/ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರು, ಕಾರ್ಯನಿರ್ವಾಹಕ ಅಧಿಕಾರಿಗಳು,

ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಮತ್ತು ನಿರ್ದೇಶಕರು(ಪಂಚಾಯತ್ ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರುಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ದಿನಾಂಕ:28.05.2018 ಮತ್ತು ಸೇರ್ಪಡೆ ಆದೇಶದ ದಿನಾಂಕ:30.08.2023ರಂದು ಅಧಿಸೂಚನೆ ಹೊರಡಿಸಲಾಗಿದೆ. ಅದರಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.

- ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟಗಳು, ಮಹಿಳಾ ಸ್ವಸಹಾಯ ಸಂಘಗಳಿಗೆ ಅರಿವು ಮೂಡಿಸುವುದು ಮತ್ತು ಶಾಲೆಯಿಂದ ಹೊರಗುಳಿದ, ದೌರ್ಜನ್ಯಕ್ಕೆ ಒಳಗಾದ ಪ್ರಾಯಪೂರ್ವ ಮಕ್ಕಳಿಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡಲು ಅಗತ್ಯವಾಗಿದೆ.

5. <u>ಸಮಾಜ ಕಲ್ಯಾಣ ಇಲಾಖೆ:</u>

- ವಸತಿ ನಿಲಯಗಳಲ್ಲಿ ಗೈರುಹಾಜರಾಗುವ ಹೆಣ್ಣು ಮಕ್ಕಳ ಹಾಜರಾತಿಯನ್ನು ಶಾಲೆಗಳಿಂದ ಪಡೆದು ಪರಿಶೀಲಿಸುವುದು.
- ಸರ್ಕಾರ ಹೊರಡಿಸಿರುವ ನಿಲಯ ಮಾರ್ಗಸೂಚಿಗಳನ್ನು ನಿಲಯ ಮೇಲ್ವಿಚಾರಕರು ಹಾಗೂ ತಾಲ್ಲೂಕು/ ಜಿಲ್ಲಾಮಟ್ಟದ ಅಧಿಕಾರಿಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವುದು.
- ವಸತಿ ನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಚಲನ-ವಲನ ಮತ್ತು ವರ್ತನೆಗಳಲ್ಲಿ ಬದಲಾವಣೆಗಳಾದಲ್ಲಿ ಗುರುತಿಸಿ, ಅಗತ್ಯ ಆಪ್ತ ಸಮಾಲೋಚನಾ ನೆರವು ಒದಗಿಸುವುದು.
- ವಿದ್ಯಾರ್ಥಿನಿಲಯಗಳಲ್ಲಿ ಸಿಸಿ ಟಿವಿ ಕಣ್ಗಾವಲಿರಿಸುವುದು.
- ಪ್ರತೀ ತಿಂಗಳು ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಗೆ ಕ್ರಮವಹಿಸುವುದು.
- ದೀರ್ಘಾವಧಿ ಗೈರುಹಾಜರಾದ ವಿದ್ಯಾರ್ಥಿನಿಯರು ನಿಲಯಕ್ಕೆ ಮರುಹಾಜರಾದಾಗ ಕಡ್ಡಾಯವಾಗಿ ವೈದ್ಯಕೀಯ ತಪಾಸಣೆಗೆ ಒಳಪಡಿಸುವುದು.
- ಗೈರುಹಾಜರಾದ ವಿದ್ಯಾರ್ಥಿಗಳ ಪಾಲಕರನ್ನು ಸಂಪರ್ಕಿಸಿ, ಮರು ದಾಖಲಾತಿಗೆ ಕ್ರಮವಹಿಸುವುದು.
- ವಸತಿ ನಿಲಯಗಳ ಆವರಣದಲ್ಲಿ ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಮಾಹಿತಿಯನ್ನು ಮತ್ತು ಬಾಲ್ಯವಿವಾಹ ನಡೆಯುವ ಕುರಿತು ಮಾಹಿತಿ ದೊರೆತಲ್ಲಿ ಸಂಪರ್ಕಿಸಬೇಕಾದ ಸಹಾಯವಾಣಿ ಹಾಗೂ ಅಧಿಕಾರಿಗಳ ಮಾಹಿತಿಯನ್ನು ಪ್ರದರ್ಶಿಸುವುದು.
- ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಮತ್ತು ವಸತಿನಿಲಯಗಳ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆ, ಬಾಲನ್ಯಾಯ ಕಾಯ್ದೆ(ಮಕ್ಕಳ ರಕ್ಷಣೆ ಮತ್ತು ಪೋಷಣೆ), ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಮಕ್ಕಳ ಸಂಬಂಧಿತ ಇತರೆ ಕಾಯ್ದೆಗಳ ಕುರಿತು ಸಂವೇದನಾ ಶೀಲತೆ ತರಬೇತಿ ನೀಡುವುದು.
- ವಸತಿನಿಲಯಗಳ ಮಕ್ಕಳಿಗೆ ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ

ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.

- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ 2016ರ ಸೆಕ್ಷನ್ 16(1)ರನ್ವಯ ತಾಲ್ಲೂಕು/ಜಿಲ್ಲಾ/ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ತಾಲ್ಲೂಕು ಹಾಗೂ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಮತ್ತು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರುಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ದಿನಾಂಕ:28.05.2018ರಂದು ಅಧಿಸೂಚಿಸಲಾಗಿದೆ. ಅದರಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.

6. <u>ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ:</u>

- ವಸತಿ ನಿಲಯಗಳಲ್ಲಿ ಗೈರುಹಾಜರಾಗುವ ಹೆಣ್ಣು ಮಕ್ಕಳ ಹಾಜರಾತಿಯನ್ನು ಶಾಲೆಗಳಿಂದ ಪಡೆದು ಪರಿಶೀಲಿಸುವುದು.
- ಸರ್ಕಾರ ಹೊರಡಿಸಿರುವ ನಿಲಯ ಮಾರ್ಗಸೂಚಿಗಳನ್ನು ನಿಲಯ ಮೇಲ್ವಿಚಾರಕರು ಹಾಗೂ ತಾಲ್ಲೂಕು/ ಜಿಲ್ಲಾ ಮಟ್ಟದ ಅಧಿಕಾರಿಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವುದು.
- ವಸತಿ ನಿಲಯಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಪೋಷಕರೊಂದಿಗೆ ಪ್ರತಿ ತಿಂಗಳು ಸಭೆಗಳನ್ನು ನಡೆಸಿ ವಿದ್ಯಾರ್ಥಿಗಳ ಚಲನ-ವಲನ ಮತ್ತು ವರ್ತನೆಗಳಲ್ಲಿ ಬದಲಾವಣೆಗಳಾಗಿದ್ದಲ್ಲಿ ಪೋಷಕರಿಗೆ ಮನವರಿಕೆ ಮಾಡಿ ಆಪ್ತ ಸಮಾಲೋಚನಾ ನೆರವು ನೀಡುವುದು.
- ವಿದ್ಯಾರ್ಥಿ ನಿಲಯಗಳಲ್ಲಿ ಸಿಸಿ ಟಿವಿ ಕಣ್ಗಾವಲಿರಿಸುವುದು
- ಪ್ರತಿ ತಿಂಗಳು ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಗೆ ಕ್ರಮ ವಹಿಸುವುದು ಹಾಗೂ ಆರೋಗ್ಯ ಹಾಗೂ ಮೌಲ್ಯಗಳ ಕುರಿತು ಜಾಗೃತಿ ಮೂಡಿಸುವುದು.
- ದೀರ್ಘಾವಧಿ ಗೈರುಹಾಜರಾದ ವಿದ್ಯಾರ್ಥಿನಿಯರು ನಿಲಯಕ್ಕೆ ಮರು ಹಾಜರಾದಾಗ ಕಡ್ಡಾಯವಾಗಿ ವೈದ್ಯಕೀಯ ತಪಾಸಣೆಗೆ ಒಳಪಡಿಸುವುದು.
- ಗೈರುಹಾಜರಾದ ವಿದ್ಯಾರ್ಥಿಗಳ ಪಾಲಕರನ್ನು ಸಂಪರ್ಕಿಸಿ, ಮರು ದಾಖಲಾತಿಗೆ ಕ್ರಮವಹಿಸುವುದು.
- ವಸತಿ ನಿಲಯಗಳ ಆವರಣದಲ್ಲಿ ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಮತ್ತು ಬಾಲ್ಯವಿವಾಹ ನಡೆಯುವ ಕುರಿತು ಮಾಹಿತಿ ದೊರೆತಲ್ಲಿ ಸಂಪರ್ಕಿಸಬೇಕಾದ ಸಹಾಯವಾಣಿ ಹಾಗೂ ಅಧಿಕಾರಿಗಳ ಮಾಹಿತಿಯನ್ನು ಪ್ರದರ್ಶಿಸುವುದು.
- ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಮತ್ತು ವಸತಿನಿಲಯಗಳ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆ, ಬಾಲನ್ಯಾಯ ಕಾಯ್ದೆ(ಮಕ್ಕಳ ರಕ್ಷಣೆ ಮತ್ತು ಪೋಷಣೆ), ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಮಕ್ಕಳ ಸಂಬಂಧಿತ ಇತರೆ ಕಾಯ್ದೆಗಳ ಕುರಿತು ಸಂವೇದನಾ ಶೀಲತೆ ತರಬೇತಿ ನೀಡುವುದು.
- ವಸತಿ ನಿಲಯಗಳಲ್ಲಿ ಮಕ್ಕಳಿಗೆ ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು ಹಾಗೂ

ವಿದ್ಯಾರ್ಥಿನಿಲಯಗಳಲ್ಲಿ ಸಂಭವಿಸಬಹುದಾದ ಸೈಬರ್ ಅಪರಾಧಗಳನ್ನು ದಾಖಲಿಸಲು ಸೈಬರ್ ಕ್ರೈಂ ಸಹಾಯವಾಣಿ ಸಂಖ್ಯೆಯನ್ನು ವಿದ್ಯಾರ್ಥಿಗಳಿಗೆ ಕಾಣುವಂತೆ ಫಲಕದಲ್ಲಿ ಪ್ರದರ್ಶಿಸುವುದು ಮತ್ತು ಸಾಮಾಜಿಕ ಜಾಲತಾಣಗಳನ್ನು ಬಳಕೆ ಮಾಡುವುದರಿಂದ ಸಂಭವಿಸಬಹುದಾದ ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸುವುದು.

- ಪ್ರತಿ ತಿಂಗಳು ಸಂಬಂಧಿಸಿದ ಮಹಿಳಾ ವಿದ್ಯಾರ್ಥಿನಿಲಯಗಳಿಗೆ ಸ್ಥಳೀಯ ಮಹಿಳಾ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಜಾಗೃತಿ ಮೂಡಿಸುವುದು.
- ವಿದ್ಯಾರ್ಥಿನಿಯರು ರಜೆಯನ್ನು ಪಡೆಯಬೇಕಾದಲ್ಲಿ ಸಂಬಂಧಪಟ್ಟ ಪೋಷಕರು ಕಡ್ಡಾಯವಾಗಿ ನಿಲಯ ಮೇಲ್ವಿಚಾರಕರಿಂದ ಅನುಮತಿಯನ್ನು ಪಡೆಯುವುದು ಹಾಗೂ ವಿದ್ಯಾರ್ಥಿನಿಯರು ರಜೆಯಿಂದ ಮರಳಿ ವಿದ್ಯಾರ್ಥಿ ನಿಲಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಪೋಷಕರಿಗೆ ನಿಲಯ ಮೇಲ್ವಿಚಾರಕರು ಮಾಹಿತಿಯನ್ನು ನೀಡುವುದು.
- ವಿದ್ಯಾರ್ಥಿನಿಲಯಗಳಲ್ಲಿ ಕಡ್ಡಾಯವಾಗಿ ಚಲನ-ವಲನ ವಹಿಯಲ್ಲಿ ವಿದ್ಯಾರ್ಥಿಗಳು ದಾಖಲಿಸಿರುವ ವಿವರವನ್ನು ಪರಿಶೀಲಿಸಿ ಮುಂಜಾಗ್ರತ ಕ್ರಮವನ್ನು ಕೈಗೊಳ್ಳುವುದು.
- ಅನಿವಾರ್ಯ ಸಂದರ್ಭಗಳನ್ನು ಹೊರತುಪಡಿಸಿ ಉಳಿದಂತೆ ಪ್ರತಿದಿನ ಸಂಜೆ 6:30 ಒಳಗೆ ವಿದ್ಯಾರ್ಥಿಗಳು ಕಡ್ಡಾಯವಾಗಿ ವಿದ್ಯಾರ್ಥಿ ನಿಲಯಗಳಲ್ಲಿ ಹಾಜರಿರುವಂತೆ ನಿಲಯ ಮೇಲ್ವಿಚಾರಕರು ಕ್ರಮ ವಹಿಸತಕ್ಕದ್ದು.

7. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ:

- ವಸತಿ ನಿಲಯಗಳಲ್ಲಿ ಗೈರುಹಾಜರಾಗುವ ಹೆಣ್ಣು ಮಕ್ಕಳ ಹಾಜರಾತಿಯನ್ನು ಶಾಲೆಗಳಿಂದ ಪಡೆದು ಪರಿಶೀಲಿಸುವುದು.
- ಸರ್ಕಾರ ಹೊರಡಿಸಿರುವ ನಿಲಯ ಮಾರ್ಗಸೂಚಿಗಳನ್ನು ನಿಲಯ ಮೇಲ್ವಿಚಾರಕರು ಹಾಗೂ ತಾಲ್ಲೂಕು/ ಜಿಲ್ಲಾ ಮಟ್ಟದ ಅಧಿಕಾರಿಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವುದು.
- ವಸತಿ ನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಚಲನ-ವಲನ ಮತ್ತು ವರ್ತನೆಗಳಲ್ಲಿ ಬದಲಾವಣೆಗಳಾದಲ್ಲಿ ಗುರುತಿಸಿ, ಅಗತ್ಯ ಆಪ್ತ ಸಮಾಲೋಚನಾ ನೆರವು ಒದಗಿಸುವುದು.
- ವಿದ್ಯಾರ್ಥಿನಿಲಯಗಳಲ್ಲಿ ಸಿಸಿ ಟಿವಿ ಕಣ್ಗಾವಲಿರಿಸುವುದು
- ಪ್ರತ ತಿಂಗಳು ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಗೆ ಕ್ರಮವಹಿಸುವುದು.
- ದೀರ್ಘಾವಧಿ ಗೈರುಹಾಜರಾದ ವಿದ್ಯಾರ್ಥಿನಿಯರು ನಿಲಯಕ್ಕೆ ಮರುಹಾಜರಾದಾಗ ಕಡ್ಡಾಯವಾಗಿ ವೈದ್ಯಕೀಯ ತಪಾಸಣೆಗೆ ಒಳಪಡಿಸುವುದು.
- ಗೈರು ಹಾಜರಾದ ವಿದ್ಯಾರ್ಥಿಗಳ ಪಾಲಕರನ್ನು ಸಂಪರ್ಕಿಸಿ, ಮರು ದಾಖಲಾತಿಗೆ ಕ್ರಮವಹಿಸುವುದು.
- ವಸತಿ ನಿಲಯಗಳ ಆವರಣದಲ್ಲಿ ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಮತ್ತು ಬಾಲ್ಯವಿವಾಹ ನಡೆಯುವ ಕುರಿತು ಮಾಹಿತಿ ದೊರೆತಲ್ಲಿ ಸಂಪರ್ಕಿಸಬೇಕಾದ ಸಹಾಯವಾಣಿ ಹಾಗೂ ಅಧಿಕಾರಿಗಳ ಮಾಹಿತಿಯನ್ನು ಪ್ರದರ್ಶಿಸುವುದು.

- ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಮತ್ತು ವಸತಿನಿಲಯಗಳ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆ, ಬಾಲನ್ಯಾಯ ಕಾಯ್ದೆ(ಮಕ್ಕಳ ರಕ್ಷಣೆ ಮತ್ತು ಪೋಷಣೆ), ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಮಕ್ಕಳ ಸಂಬಂಧಿತ ಇತರೆ ಕಾಯ್ದೆಗಳ ಕುರಿತು ಸಂವೇದನಾ ಶೀಲತೆ ತರಬೇತಿ ನೀಡುವುದು.
- ವಸತಿನಿಲಯಗಳ ಮಕ್ಕಳಿಗೆ ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ 2016ರ ಸೆಕ್ಷನ್ 16(1)ರನ್ವಯ ತಾಲ್ಲೂಕು/ಜಿಲ್ಲಾ/ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ವಿಸ್ತರಣಾಧಿಕಾರಿಗಳು, ಜಿಲ್ಲಾ ಅಧಿಕಾರಿಗಳು ಮತ್ತು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರುಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ದಿನಾಂಕ:28.05.2018ರಂದು ಅಧಿಸೂಚಿಸಲಾಗಿದೆ. ಅದರಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.
- ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಗಳಲ್ಲಿ ಯಾವುದೇ ಬಾಲಕಿ ಒಮ್ಮೆ ಹಾಸ್ಟೆಲ್ ಪ್ರವೇಶಾತಿ ಪಡೆದು, ಶೈಕ್ಷಣಿಕ ವರ್ಷದ ಮಧ್ಯದಲ್ಲಿ ವಸತಿ ನಿಲಯವನ್ನು ಬಿಟ್ಟು ಹೋಗುವ ಪ್ರಕರಣಗಳಲ್ಲಿ ಕಡ್ಡಾಯವಾಗಿ ಸಂಬಂಧಪಟ್ಟ ಪೋಷಕರನ್ನು ಕರೆದು ಸಮಾಲೋಚನೆ ನಡೆಸತಕ್ಕದ್ದು.

8. <u>ಅಲ್ಪಸಂಖ್ಯಾತರ ಕಲ್ಯಾಣ/ಹಜ್ ಮತ್ತು ವಕ್ಫ್ ಇಲಾಖೆ:</u>

- ವಸತಿ ನಿಲಯಗಳಲ್ಲಿ ಗೈರು ಹಾಜರಾಗುವ ಹೆಣ್ಣು ಮಕ್ಕಳ ಹಾಜರಾತಿಯನ್ನು ಶಾಲೆಗಳಿಂದ ಪಡೆದು ಪರಿಶೀಲಿಸುವುದು.
- ಸರ್ಕಾರ ಹೊರಡಿಸಿರುವ ನಿಲಯ ಮಾರ್ಗಸೂಚಿಗಳನ್ನು ನಿಲಯ ಮೇಲ್ವಿಚಾರಕರು ಹಾಗೂ ತಾಲ್ಲೂಕು/ ಜಿಲ್ಲಾ ಮಟ್ಟದ ಅಧಿಕಾರಿಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವುದು.
- ವಸತಿ ನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಚಲನ-ವಲನ ಮತ್ತು ವರ್ತನೆಗಳಲ್ಲಿ ಬದಲಾವಣೆಗಳಾದಲ್ಲಿ ಗುರುತಿಸಿ, ಅಗತ್ಯ ಆಪ್ತ ಸಮಾಲೋಚನಾ ನೆರವು ಒದಗಿಸುವುದು.
- ವಿದ್ಯಾರ್ಥಿನಿಲಯಗಳಲ್ಲಿ ಸಿಸಿ ಟಿವಿ ಕಣ್ಗಾವಲಿರಿಸುವುದು
- ಪ್ರತೀ ತಿಂಗಳು ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಗೆ ಕ್ರಮವಹಿಸುವುದು.
- ದೀರ್ಘಾವಧಿ ಗೈರುಹಾಜರಾದ ವಿದ್ಯಾರ್ಥಿನಿಯರು ನಿಲಯಕ್ಕೆ ಮರುಹಾಜರಾದಾಗ ಕಡ್ಡಾಯವಾಗಿ ವೈದ್ಯಕೀಯ ತಪಾಸಣೆಗೆ ಒಳಪಡಿಸುವುದು.
- ಗೈರುಹಾಜರಾದ ವಿದ್ಯಾರ್ಥಿಗಳ ಪಾಲಕರನ್ನು ಸಂಪರ್ಕಿಸಿ, ಮರು ದಾಖಲಾತಿಗೆ ಕ್ರಮವಹಿಸುವುದು.
- ವಸತಿ ನಿಲಯಗಳ ಆವರಣದಲ್ಲಿ, ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳ ಕುರಿತು ಮತ್ತು ಬಾಲ್ಯವಿವಾಹ ನಡೆಯುವ ಕುರಿತು

ಮಾಹಿತಿ ದೊರೆತಲ್ಲಿ ಸಂಪರ್ಕಿಸಬೇಕಾದ ಸಹಾಯವಾಣಿ ಹಾಗೂ ಅಧಿಕಾರಿಗಳ ಮಾಹಿತಿಯನ್ನು ಪ್ರದರ್ಶಿಸುವುದು.

- ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಮತ್ತು ವಸತಿನಿಲಯಗಳ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆ, ಬಾಲನ್ಯಾಯ ಕಾಯ್ದೆ(ಮಕ್ಕಳ ರಕ್ಷಣೆ ಮತ್ತು ಪೋಷಣೆ), ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಮಕ್ಕಳ ಸಂಬಂಧಿತ ಇತರೆ ಕಾಯ್ದೆಗಳ ಕುರಿತು ಸಂವೇದನಾ ಶೀಲತೆ ತರಬೇತಿ ನೀಡುವುದು.
- ವಸತಿನಿಲಯಗಳ ಮಕ್ಕಳಿಗೆ ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.

೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:

- ಗ್ರಾಮ ಪಂಚಾಯತ್ ಕಾವಲು ಸಮಿತಿಗಳನ್ನು ಹೆಚ್ಚು ಕ್ರಿಯಾಶೀಲಗೊಳಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯೊಂದಿಗೆ ಸಮನ್ವಯತೆಯಿಂದ ಕೆಲಸ ನಿರ್ವಹಿಸುವುದು.
- ಬಾಲ್ಯವಿವಾಹಗಳನ್ನು ತಡೆಗಟ್ಟಲು KHPT ಸಂಸ್ಥೆಯ ಮೂಲಕ ಸ್ಫೂರ್ತಿ ಕಾರ್ಯಕ್ರಮದ ತರಬೇತಿ ಮಾದರಿಯನ್ನು ಅನುಸರಿಸಿ ಹೆಚ್ಚು ಬಾಲಗರ್ಭಿಣಿಯರ ಪ್ರಕರಣಗಳು ವರದಿಯಾಗಿರುವ ಜಿಲ್ಲೆಗಳಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಹಂತದಲ್ಲಿ ವಿವಿಧ ಭಾಗೀದಾರ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ಆಯೋಜಿಸಲು ರೂ.457.88 ಲಕ್ಷಗಳ ಪ್ರಸ್ತಾವನೆಯನ್ನು ಸ್ವೀಕರಿಸಿದ್ದು, ಪರಿಗಣಿಸುವ ಹಾಗೂ ಅನುಮೋದನೆ ಪಡೆಯುವ ಕುರಿತು ಕ್ರಮವಹಿಸುವುದು.
- ಆರ್‌ಸಿಎಚ್ ದತ್ತಾಂಶವನ್ನು ಜಿಲ್ಲಾ ಹಂತದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಪಡೆದು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಹಂತದಲ್ಲಿ ವಿಶ್ಲೇಷಿಸಿ ಬಾಲಗರ್ಭಿಣಿಯರ ರಕ್ಷಣೆ ಮತ್ತು ಪುನರ್ವಸತಿಗೆ ಕ್ರಮವಹಿಸುವುದು.
- ಬಾಲ್ಯವಿವಾಹಗಳನ್ನು ತಡೆಯುವ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆಗಳನ್ನು ನಿಯಮಿತವಾಗಿ ಆಯೋಜಿಸುವುದು ಹಾಗೂ ಬಾಲ್ಯವಿವಾಹ ತಡೆಗಟ್ಟುವ ಕುರಿತು ಮೇಲ್ವಿಚಾರಣೆ ಮಾಡುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆಯ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದಂತೆ, ವಿವಿಧ ಭಾಗೀಧಾರ ಇಲಾಖೆಗಳೊಂದಿಗೆ ಸಮನ್ವಯತೆ ಸಾಧಿಸುವುದು.
- ಬಾಲ್ಯವಿವಾಹಗಳನ್ನು ತಡೆಯುವ ರಾಜ್ಯ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಯನ್ನೇ "ಕೇಂದ್ರೀಯ ಕಾರ್ಯಪಡೆ" ಎಂದು ಗುರುತಿಸಿ ಸಭೆಯನ್ನು ನಿಯಮಿತವಾಗಿ 3 ತಿಂಗಳಿಗೊಮ್ಮೆ ಆಯೋಜಿಸಲು ಅಧಿಸೂಚಿಸುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ 2016ರ ಸೆಕ್ಷನ್ 16(1)ರನ್ವಯ ಗ್ರಾಮ/ತಾಲ್ಲೂಕು/ಜಿಲ್ಲೆ ಹಾಗೂ ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ಗ್ರಾಮ ಮೇಲ್ವಿಚಾರಕಿಯರು, ಶಿಶು ಅಭಿವೃದ್ಧಿ

ಯೋಜನಾಧಿಕಾರಿಗಳು, ಸಂರಕ್ಷಣಾಧಿಕಾರಿಗಳು, ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ, ನಿರೂಪಣಾಧಿಕಾರಿಗಳು, ಉಪನಿರ್ದೇಶಕರು ಮತ್ತು ನಿರ್ದೇಶಕರು ಇವರುಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ದಿನಾಂಕ:28.05.2018ರಂದು ಅಧಿಸೂಚನೆ ಹೊರಡಿಸಲಾಗಿದೆ. ಅದರಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.

- ಆರ್‌ಸಿಹೆಚ್ ಪೋರ್ಟಲ್‌ನಲ್ಲಿ ದಾಖಲಾಗುವ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಗರ್ಭಿಣಿಯರ ಮಾಹಿತಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಪಡೆದು ವಿಶ್ಲೇಷಿಸಿ ಬಾಲಗರ್ಭಿಣಿಯರಿಗೆ ಅಗತ್ಯ ರಕ್ಷಣೆ ಹಾಗೂ ಪುನರ್ವಸತಿ ಒದಗಿಸುವುದು.
- ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಮತ್ತು ಬಾಲಮಂದಿರದ ಮಕ್ಕಳಿಗೆ ಪೋಕ್ಸೋ ಕಾಯ್ದೆ, ಬಾಲನ್ಯಾಯ ಕಾಯ್ದೆ(ಮಕ್ಕಳ ರಕ್ಷಣೆ ಮತ್ತು ಪೋಷಣೆ), ಬಾಲ್ಯವಿವಾಹ ನಿಷೇಧ ಕಾಯ್ದೆ, ಬಾಲ್ಯವಿವಾಹದ ದುಷ್ಪರಿಣಾಮಗಳ ಕುರಿತು ಅರಿವು ಮತ್ತು ಜಾಗೃತಿ ಕಾರ್ಯಕ್ರಮಗಳನ್ನುಏರ್ಪಡಿಸುವುದು.
- ಮಕ್ಕಳಿಗೆ ಸುಲಭವಾಗಿ ಅರ್ಥವಾಗುವ ಮಾಧ್ಯಮಗಳ ಮೂಲಕ ಲೈಂಗಿಕ ಶಿಕ್ಷಣ/ಸ್ವಯಂ ರಕ್ಷಣಾ ಕ್ರಮಗಳು/ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವುದು.
- ಮಕ್ಕಳ ಸಹಾಯವಾಣಿ-1098 ಕುರಿತು ವ್ಯಾಪಕ ಪ್ರಚಾರ ಮಾಡುವುದು .
- ಮಕ್ಕಳ ಕಲ್ಯಾಣ ಸಮಿತಿ ಸದಸ್ಯರುಗಳಿಗೆ ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಮತ್ತು ಬಾಲನ್ಯಾಯ ಕಾಯ್ದೆಗಳ ಕುರಿತು ಸಂವೇದನಾ ತರಬೇತಿಗಳನ್ನು ಏರ್ಪಡಿಸುವುದು.
- ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮೂಲಕ ಶಾಲಾಕಾಲೇಜು/ ವಸತಿನಿಲಯಗಳಲ್ಲಿ ಬಾಲಗರ್ಭಿಣಿಯರು/ ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟುವ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.
- ಬಾಲ್ಯವಿವಾಹಗಳನ್ನು ತಡೆಗಟ್ಟಿದ ಪ್ರಕರಣಗಳಲ್ಲಿ ಹೆಣ್ಣು ಮಗುವಿಗೆ 18 ವರ್ಷ ಪೂರ್ಣಗೊಳ್ಳುವವರೆಗೂ ವಿವಾಹವಾಗದಂತೆ ಅನುಸರಣೆ ಮಾಡುವುದು.
- ಸರ್ಕಾರಿ/ಖಾಸಗಿ ಮಕ್ಕಳ ಪಾಲನಾ ಕೇಂದ್ರಗಳಲ್ಲಿ ದಾಖಲಾಗಿರುವ ಮಕ್ಕಳಿಗೆ ಪ್ರತೀ ತಿಂಗಳು ಆರೋಗ್ಯ ತಪಾಸಣೆಗೆ ಮಾಡಿಸುವುದು.
- ದೀರ್ಘಾವಧಿ ಗೈರುಹಾಜರಾದ ವಿದ್ಯಾರ್ಥಿನಿಯರು ಪಾಲನಾ ಕೇಂದ್ರಗಳಿಗೆ ಮರುಹಾಜರಾದಾಗ ಕಡ್ಡಾಯವಾಗಿ ವೈದ್ಯಕೀಯ ತಪಾಸಣೆಗೆ ಒಳಪಡಿಸುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ 2016ರ ಸೆಕ್ಷನ್ 16(1)ರನ್ವಯ ಜಿಲ್ಲಾ ಹಾಗೂ ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಮತ್ತು ಯೋಜನಾ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಇವರನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ದಿನಾಂಕ:28.05.2018 ರಂದು ಅಧಿಸೂಚನೆ ಹೊರಡಿಸಲಾಗಿದೆ. ಅದರಂತೆ ಬಾಲ್ಯವಿವಾಹ

ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.

10. <u>ಕಂದಾಯ ಇಲಾಖೆ:</u>

- ದಿನಾಂಕ:06.08.2019ರ ಸರ್ಕಾರದ ಆದೇಶದಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ರಚನೆಯಾದ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಗಳಲ್ಲಿ ಗ್ರಾಮ ಆಡಳಿತ ಅಧಿಕಾರಿ ಸದಸ್ಯರಾಗಿದ್ದು, ಪ್ರತೀ ಗ್ರಾಮದಲ್ಲಿ ಜನಿಸುವ ಮಕ್ಕಳ ನೋಂದಣಿ ಮತ್ತು ಜನನ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.
- ಸಾಮೂಹಿಕ/ವೈಯಕ್ತಿಕ ವಿವಾಹಗಳಲ್ಲಿ ಬಾಲ್ಯವಿವಾಹ ನಡೆಯದಂತೆ ನಿಗಾವಹಿಸುವುದು ಮತ್ತು ದೂರು ಬಂದಲ್ಲಿ ಸೂಕ್ತ ಕ್ರಮಕೈಗೊಂಡು ಬಾಲ್ಯವಿವಾಹ ನಿಷೇಧ ಕಾಯ್ದೆಯನ್ವಯ ಬಾಲ್ಯವಿವಾಹಗಳನ್ನು ತಡೆಯಲು ಕ್ರಮವಹಿಸುವುದು.
- ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ ಎಂದು ಸಾರ್ವಜನಿಕರಿಗೆ ಮಾಹಿತಿ ನೀಡುವ ಫಲಕಗಳನ್ನು ಪ್ರದರ್ಶಿಸುವುದು.
- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ 2016ರ ಸೆಕ್ಷನ್ 16(1)ರನ್ವಯ ಗ್ರಾಮ/ತಾಲ್ಲೂಕು/ಜಿಲ್ಲೆ ಹಾಗೂ ರಾಜ್ಯ ವ್ಯಾಪ್ತಿಯಲ್ಲಿ ಕ್ರಮವಾಗಿ ಗ್ರಾಮ ಆಡಳಿತ ಅಧಿಕಾರಿ, ಕಂದಾಯ ನಿರೀಕ್ಷಕರು, ತಹಶೀಲ್ದಾರ್, ಜಿಲ್ಲಾಧಿಕಾರಿಗಳು ಮತ್ತು ಸರ್ಕಾರದ ಕಾರ್ಯದರ್ಶಿಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ದಿನಾಂಕ:28.05.2018 ರಂದು ಅಧಿಸೂಚನೆ ಹೊರಡಿಸಲಾಗಿದೆ. ಅದರಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಗದಿಪಡಿಸಲಾದ ಕರ್ತವ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವ ಕುರಿತು ನಿರ್ದೇಶನ ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಸಿ. ಬಲರಾಮ್)**
ಸರ್ಕಾರದ ಉಪ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

*****